ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1480 (1806)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಶಶೀಲ್ ಜಿ. ನಮೋಶಿ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಸಹಾಯಕ ನಿರ್ದೇಶಕರ ಹುದ್ದೆಗೆ ಬಡ್ತಿ ನೀಡುವ ಕುರಿತು

(ಅ) ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಸಹಾಯಕ ನಿರ್ದೇಶಕರ ಹುದ್ದೆಗೆ ಬಡ್ತಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸಹಾಯಕ ನಿರ್ದೇಶಕರ ಹುದ್ದೆಗೆ ಬಡ್ತಿಗಾಗಿ, ಕರ್ನಾಟಕ ಆಡಳಿತಾತ್ಮಕ ನ್ಯಾಯಮಂಡಳಿಯಿಂದ ಆದೇಶ ಪಡೆದರೂ ಬಡ್ತಿ ನೀಡದೇ ಇರುವುದಕ್ಕೆ ಕಾರಣಗಳೇನು;

(ಇ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಹಾಯಕ ನಿರ್ದೇಶಕರ ಹುದ್ದೆಗಳು ಖಾಲಿ ಇರುವ ಕಾರಣ ಗ್ರಾಮೀಣಾಭಿವೃದ್ಧಿ ಅಡಚಣೆಯಾಗುತ್ತಿರುವುದು ಸರ್ಕಾರ ಗಂಭೀರವಾಗಿ ಪರಿಗಣಿಸದೇ ಇರಲು ಕಾರಣವೇನು ;

(ಈ) ಕಲ್ಯಾಣ ಕರ್ನಾಟಕ ಪ್ರದೇಶದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಯಾವಾಗ ಬಡ್ತಿ ನೀಡಲಾಗುವುದು ?